## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** M/s Vish Wind Infrastructure LLP ಕಂಪನಿಗೆ ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳ ಬೈಲಹೊಂಗಲ, ಗೋಕಾಕ್ ಮತ್ತು ಧಾರವಾಡ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 19.20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

**ಓದಲಾಗಿದೆ:**
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: 1637 –V
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ: 02.03.2018 ರ ಹಂಚಿಕೆ ಸಮಿತಿ ಸಭೆ ನಡವಳಿಗಳು.

ಸಂ. 1385
ದಿನಾಂಕ 03/04/18

* * *

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಏಕ ಕಡತ ಪದ್ಧತಿಯಡಿಯಲ್ಲಿ M/s Vish Wind Infrastructure LLP ಕಂಪನಿಯವರು ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳ ಬೈಲಹೊಂಗಲ, ಗೋಕಾಕ್ ಮತ್ತು ಧಾರವಾಡ ತಾಲ್ಲೂಕುಗಳ ಉಗರ್‌ಕೋಡ್, ದೇಮಟ್ಟಿ, ಹನ್ನಿದಿಬ್ಬ, ಹುಲಿಕಟ್ಟಿ, ಕೊಟ್‌ಬಾಗಿ, ಕಡ್‌ತನ್ನಾಲ್, ಕಲ್ ಭಾವಿ, ಚಿಕ್ ನಂದಿಹಳ್ಳಿ, ಹಿರೇನಂದಿಹಳ್ಳಿ, ಹುಣಸಿಕಟ್ಟಿ, ತುರಮುರಿ, ಹೊಳೆ ನಾಗಲಾಪುರ್, ಕುಲುಮನಹಟ್ಟಿ, ತುಕ್ಕರ ಸಿಗೀಹಳ್ಳಿ, ಕಡಸ್ಗಟ್ಟಿ, ಹಿರೇ ಬೆಳ್ಳಿಕಟ್ಟಿ, ಜಮನೂರ್, ಕುದನ್ ಪುರ್, ಸಾವ್ಗಿ, ಪಟ್ಟೇಹಾಲ್, ಸಿದ್ದಸಮುದ್ರ, ಬಿದರ್ ಗಡ್ಡಿ ಮತ್ತು ಬುದರ್ ಕಟ್ಟಿ ಗ್ರಾಮಗಳಲ್ಲಿ 19.20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಹಂಚಿಕೆ ನೀಡುವಂತೆ ಕೋರಿದ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಸದರಿ ಸ್ಥಳವು ಈಗಾಗಲೇ M/s NEG Micon (India) Private Limited ರವರಿಗೆ ಹಂಚಿಕೆಯಾಗಿ ರದ್ದುಗೊಂಡಿರುವ ಸ್ಥಳದಲ್ಲಿರುತ್ತದೆ. M/s Vish Wind Infrastructure LLP ಕಂಪನಿಯ ನೆಟ್‌ವರ್ತ್ ದಿನಾಂಕ: 31.03.2017 ರ ಅಂತ್ಯಕ್ಕೆ ರೂ.432.11 ಕೋಟಿಗಳೆಂದು ಚಾರ್ಟೆಡ್ ಅಂಕೌಂಟೆಂಟ್ ದೃಢೀಕರಣ ಪತ್ರ ಹಾಗೂ ಬ್ಯಾಲೆನ್ಸ್ ಶೀಟ್‌ಗಳನ್ನು ಸಲ್ಲಿಸಿರುವುದಾಗಿ ತಿಳಿಸಿರುತ್ತಾರೆ ಹಾಗೂ ಸದರಿ ಕಂಪನಿಯು Registrar of Companies, Ministry of Corporate Affairs, Government of India, Mumbai, Maharashtra ಇವರಲ್ಲಿ ದಿನಾಂಕ: 23.02.2016 ರಂದು CIN ಸಂಖ್ಯೆ No.AAA-1760 (Limited Liability Partnership Firm) ರನ್ವಯ ನೋಂದಣಿಯಾಗಿರುತ್ತದೆ. M/s Vish Wind Infrastructure LLP ಕಂಪನಿಯವರಿಗೆ ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳ ಬೈಲಹೊಂಗಲ, ಗೋಕಾಕ್ ಮತ್ತು ಧಾರವಾಡ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 19.20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ ಸ್ವಂತ ಉಪಯೋಗಕ್ಕಾಗಿ / ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಸಲುವಾಗಿ ಹಂಚಿಕೆ ಮಾಡಲು ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಹಂಚಿಕೆ ಸಮಿತಿ ಮುಂದೆ ಮಂಡಿಸಲು ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

GM (Tech) i/c

...2)

Geographical area description for 19.2 MW capacity wind power project

| Sl. No | Toposheet No. | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 48 I / 14 | 19.2 MW (24 Nos x 800 kw) | Ugarkhod, Honnidibba, Dematti, Hulikatti, Kotbagi, Chik Nandihalli, Hire Nandihalli, Kalbavi, Hunshikatti, Turmuri, Kadtanhal, Kulmanahatti, holenagalapur, Khudanpur, Savatgi, Herebelikatti, jamanur, Chinchalgudda, Turkara Sigihalli, Kadasgatti, Bidargaddi, Budarkatti, Siddasamidra and Pattehal Villages of Bailhongala, Gokak and Dharwad, Taluks of Belagavi and Dharwad District,. | The proposed area is surrounded by point A, B, C, D and are held in the following Geographical co-ordinates as:<br><br>**Point A**:**Lat:** 15°37'40.4"N, Long: 74°45'0''E<br>**Point B**:**Lat:** 15°42'45.5"N, Long: 74°45'0''E<br>**Point C**:**Lat:** 15°42'33.7"N, Long: 74°55'0''E<br>**Point D**:**Lat:** 15°37'31.1"N, Long: 74°55'0''E<br><br>Peaks: 748, 737, 725, 743, 717, 673, 708, 727, 794, 730, 689, 721, 714, 710, 696, 676, 707, 717, 658, 680 and 698m Amsl. |
| | **Total** | **19.2 MW** | | |

ಮೇಲೆ ಓದಲಾದ ಕ್ರಮ ಸಂಖ್ಯೆ: (2) ದಿನಾಂಕ: 02.03.2018 ರಂದು ನಡೆದ ಹಂಚಿಕೆ ಸಮಿತಿ ಸಭೆಯಲ್ಲಿ M/s Vish Wind Infrastructure LLP ಕಂಪನಿಯವರಿಗೆ ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳ ಬೈಲಹೊಂಗಲ, ಗೋಕಾಕ್ ಮತ್ತು ಧಾರವಾಡ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 19.20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಪ್ರಸ್ತಾವನೆಗೆ ಸಮಿತಿಯು ಸದರಿ ಕಂಪನಿಯವರು ಸ್ಥಾಪಿಸಲು ಉದ್ದೇಶಿಸಿರುವ ಸ್ಥಳವು ಖಾಸಗಿ ಜಮೀನಾಗಿದ್ದು, ಸದರಿ ಸ್ಥಳದಲ್ಲಿ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ 19.20 ಮೆ.ವ್ಯಾ ಸಾಮರ್ಥ್ಯಕ್ಕೆ ಹಂಚಿಕೆ ನೀಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಇಎನ್ 91 ಎನ್‌ಸಿಇ 2018, ಬೆಂಗಳೂರು, ದಿನಾಂಕ: 23.03.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, M/s Vish Wind Infrastructure LLP ಕಂಪನಿಗೆ ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳ ಬೈಲಹೊಂಗಲ, ಗೋಕಾಕ್ ಮತ್ತು ಧಾರವಾಡ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 19.20 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ವಂತ ಉಪಯೋಗಕ್ಕಾಗಿ / ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಸಲುವಾಗಿ ಈ ಕೆಳಗಿನ ಷೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

...3)

Geographical area description for 19.2 MW capacity wind power project

| Sl. No | Toposheet No. | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 48 I / 14 | 19.2 MW (24 Nos x 800 kw) | Ugarkhod, Honnidibba, Dematti, Hulikatti, Kotbagi, Chik Nandihalli, Hire Nandihalli, Kalbavi, Hunshikatti, Turmuri, Kadtanhal, Kulmanahatti, holenagalapur, Khudanpur, Savatgi, Herebelikatti, jamanur, Chinchalgudda, Turkara Sigihalli, Kadasgatti, Bidargaddi, Budarkatti, Siddasamidra and Pattehal Villages of Bailhongala, Gokak and Dharwad, Taluks of Belagavi and Dharwad District,. | The proposed area is surrounded by point A, B, C, D and are held in the following Geographical co-ordinates as:<br><br>**Point A**:**Lat:** 15°37'40.4"N, Long: 74°45'0''E<br>**Point B**:**Lat:** 15°42'45.5"N, Long: 74°45'0''E<br>**Point C**:**Lat:** 15°42'33.7"N, Long: 74°55'0''E<br>**Point D**:**Lat:** 15°37'31.1"N, Long: 74°55'0''E<br><br>Peaks: 748, 737, 725, 743, 717, 673, 708, 727, 794, 730, 689, 721, 714, 710, 696, 676, 707, 717, 658, 680 and 698m Amsl. |
| | Total | 19.2 MW | | |

ಷರತ್ತುಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮಿನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಕೆ.ಪಿ.ಟಿ.ಸಿ.ಎಲ್ ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

....4)

8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.
10. ಕರ್ನಾಟಕ ಭೂಸುಧಾರಣಾ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.
11. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:** ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

ಪ್ರತಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ,ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಹೆಸ್ಕಾಂ/ಬೆಸ್ಕಾಂ/ಸೆಸ್ಕಾಂ/ಜೆಸ್ಕಾಂ/ಮೆಸ್ಕಾಂ.
6. ಜಿಲ್ಲಾಧಿಕಾರಿಗಳು, ಬೆಳಗಾವಿ ಮತ್ತು ಧಾರವಾಡ ಜಿಲ್ಲೆ.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
8. ಉಪ ಅರಣ್ಯ ಸಂರಕ್ಷಣಾಧಿಕಾರಿ, ಬೆಳಗಾವಿ ಮತ್ತು ಧಾರವಾಡ ಜಿಲ್ಲೆ.
9. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10. M/s Vish Wind Infrastructure LLP, Wind World Tower, A-9, Veera Industrial Estate, Veera Desai Road, Andheri (West), Mumbai- 400 053.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.